ದಿನಾಂಕಃ **25.07.2025** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : 2ನೇ ಎದುರುದಾರರ ಪರ ವಕೀಲರಿಂದ :</u>**

ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.

ದ್ವಿಚಕ್ರ ವಾಹನದ ವಿಮೆ ಪಾಲಿಸಿಯ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಆರ್-1** ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಅರ್ಜಿದಾರರ ಪರ ವಕೀಲರಿಂದ :</u>**

ದ್ವಿಚಕ್ರ ವಾಹನಕ್ಕೆ ಆ ಸಮಯದಲ್ಲಿ 3rd party ವಿಮೆ ಇರುತ್ತದೆ, ಅದರ ಚಾಲಕನಿಗೆ ಚಾಲನಾ ಪರವಾನಗಿ ಇತ್ತು. ಅಂತಿಮ ವರದಿಯನ್ನು 2 ವಾಹನಗಳ ವಿರುದ್ಧ ಸಲ್ಲಿಸಿರುತ್ತಾರೆ ಎಂದರೆ ಸರಿ. ಅಂತಿಮ ವರದಿಯನ್ನು ನಾವು ಪ್ರಶ್ನಿಸಿರುವುದಿಲ್ಲ ಎಂದರೆ ಸರಿ. ವಿಮೆ ಚಾಲ್ತಿಯಲ್ಲಿರುವ ಕಾರಣ ಅರ್ಜಿದಾರರಿಗೆ ಪರಿಹಾರ ಕೊಡಲು ಬಾಧ್ಯರು ಎಂದರೆ ಸಾಕ್ಷಿಯು ಅದು 3rd party ವಿಮೆ ಇದ್ದು ಹಿಂಬದಿ ಸವಾರರಿಗೆ ಪರಿಹಾರ ಕೊಡಲು ಬರುವುದಿಲ್ಲ ಎನ್ನುತ್ತಾರೆ. ನಾವು ಪರಿಹಾರ ಪಾವತಿಸಿ ನಂತರ ಅದನ್ನು ವಸೂಲಿ ಮಾಡಬೇಕು ಎಂದರೆ ಸರಿಯಲ್ಲ. ಪರಿಹಾರ ಕೊಡುವ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ಉದ್ದೇಶಕ್ಕಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**